# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ: ವಾರ್ಡ್ ಸಂಖ್ಯೆ 10/ಸಭೆ/ಪಿಆರ್/31/2021-22 ದಿನಾಂಕ: 17/01/2022.

ಮಾನ್ಯ ಆಯುಕ್ತರು ರವರ ಸುತ್ತೋಲೆ ಸಂಖ್ಯೆ ಬಿ12(5)/ಪಿ.ಆರ್/35/2020-21, ದಿನಾಂಕ 21/09/2020ರ ಆದೇಶದ ಅನ್ವಯ ವಾರ್ಡ್ ನಂ. 10 ದೊಡ್ಡಬೊಮ್ಮಸಂದ್ರ ವಾರ್ಡ್ ಕಛೇರಿಯಲ್ಲಿ ದಿನಾಂಕ: 17-01-2022 ರಂದು ನೋಡೆಲ್ ಅಧಿಕಾರಿ ರವರ ಅಧ್ಯಕ್ಷತೆಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು

**ಹಾಜರಿದ್ದ ಅಧಿಕಾರಿ/ಸದಸ್ಯರು**

1. ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ಹಾಗೂ ಸ.ಕಾ.ಅ, ಕೊಡಿಗೇಹಳ್ಳಿ ಉಪವಿಭಾಗ
2. ಶ್ರೀಮತಿ. ಶ್ವೇತಾ ಎನ್.ಆರ್, ಸಹಾಯಕ ಅಭಿಯಂತರರು
3. ಶ್ರೀ ಮಂಜುನಾಥ್, ಕಿರಿಯ ಆರೋಗ್ಯ ಪರಿವೀಕ್ಷಕರು
4. ಶ್ರೀ. ಪ್ರವೀಣ್, ಹಿರಿಯ ಆರೋಗ್ಯ ಪರಿವೀಕ್ಷಕರು
5. ಶ್ರೀ. ಬಾಬುರೆಡ್ಡಿ, ವಿದ್ಯುತ್ ವಿಭಾಗ, ಬಿಬಿಎಂಪಿ
6. ಶ್ರೀ. ದಯಾಳ್, ಸದಸ್ಯರು,
7. ಶ್ರೀ ಎಂ. ಶ್ರೀನಿವಾಸ್, ಸದಸ್ಯರು,
8. ಶ್ರೀ. ಗೋಪಾಲಕೃಷ್ಣ, ಸದಸ್ಯರು,
9. ಶ್ರೀ. ಮಾಲಾದ್ರಿ, ಸದಸ್ಯರು.

**ಶ್ರೀ ಜಿ. ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ:-** ಸಭೆಗೆ ಹಾಜರಿದ್ದ ಅಧಿಕಾರಿ ಹಾಗೂ ಸದಸ್ಯರನ್ನು ಪರಿಚಯ ಮಾಡಿಕೊಳ್ಳುವುದರ ಮುಖಾಂತರ ಸಭೆಯನ್ನು ಪ್ರಾರಂಭಿಸಿದರು. ಹಿಂದಿನ ಸಭೆಯ ನಡವಳಿಯನ್ನು ಸಭೆಯಲ್ಲಿ ಓದಿ, ವಾರ್ಡಿಗೆ ಸಂಬಂಧಿಸಿದ ವಿಷಯಗಳ ಬಗ್ಗೆ ಚರ್ಚಿಸಲು ಎಲ್ಲರನ್ನು ಕೋರಿ ಸಭೆಯಲ್ಲಿ ನಡೆಯುವ ನಡವಳಿಗಳನ್ನು ನಮೂದಿಸಲು ತಿಳಿಸಿದರು.

<u>ದಿನಾಂಕ: 17-01-2022 ರ ಸಭೆಯ ನಡಾವಳಿಗಳು:</u>

**ಶ್ರೀಮತಿ ಡಾ॥ ಶೋಭ ನಾಗೇಶ್, ಆರೋಗ್ಯ ವೈದ್ಯಾಧಿಕಾರಿ:-**

- ಓಮಿಕ್ರಾನ್ ಸಾಂಕ್ರಾಮಿಕ ರೋಗವು ಹರಡುತ್ತಿರುವುದರಿಂದ ಸಾರ್ವಜನಿಕರು ಬಹಳ ಎಚ್ಚರಿಕೆಯಿಂದ ಇದ್ದು, ಸರ್ಕಾರವು ಹೊರಡಿಸಿರುವ ಮಾರ್ಗಸೂಚಿಗಳನ್ನು ತಪ್ಪದೇ ಪಾಲಿಸಿ, ಮಾಸ್ಕ್ ಹಾಗೂ ಸ್ಯಾನಿಟೈಜರ್ ಉಪಯೋಗಿಸುವಂತೆ ಸಾರ್ವಜನಿಕರಿಗೆ ತಿಳುವಳಿಕೆ ನೀಡಿದರು. ಹಾಗೂ ವಿದೇಶದಿಂದ ಯಾವುದೇ ಪ್ರಯಾಣಿಕರು ಅಥವಾ ಕೇರಳ, ಮಹಾರಷ್ಟ್ರಾ ರಾಜ್ಯಗಳಿಂದ ಜನರು ಬಂದಿದ್ದಲ್ಲಿ ಆರೋಗ್ಯ ಇಲಾಖೆ ಸಿಬ್ಬಂಧಿಗೆ ತಿಳಿಸಿ ಪರೀಕ್ಷೆ ನಡೆಸಲು ಸಹಕರಿಸುವಂತೆ ಸಾರ್ವಜನಿಕರಲ್ಲಿ ಕೋರಿರುತ್ತಾರೆ.
- ಮುಂದಿನ ದಿನಗಳಲ್ಲಿ ಸರ್ಕಾರದ ವತಿಯಿಂದ ಸಾರ್ವಜನಿಕರಿಗೆ ಬೂಸ್ಟರ್ ಡೋಸ್ ವ್ಯಾಕ್ಸಿನೇಷನ್ ನೀಡಲು ತೀರ್ಮಾನಿಸಿದ್ದು, ಸಾರ್ವಜನಿಕರು 2ನೇ ಡೋಸ್ ಪಡೆದು 9 ತಿಂಗಳು ಮುಗಿದ ನಂತರ ಬೂಸ್ಟರ್ ಡೋಸ್ ಪಡೆಯಲು ಆಧಾರ್ ಕಾರ್ಡ್, ಚುನಾವಣಾ ಗುರುತಿನ ಚೀಟಿ, ವ್ಯಾಕ್ಸಿನೇಷನ್ ಪ್ರಮಾಣ ಪತ್ರ ಸಲ್ಲಿಸುವುದು ಕಡ್ಡಾಯವೆಂದು ವೈದ್ಯಾಧಿಕಾರಿಗಳು ಸೂಚಿಸಿರುತ್ತಾರೆ.
- ಯಾವುದೇ ವ್ಯಕ್ತಿಗೆ ಕೋವಿಡ್ ಪಾಸಿಟಿವ್ ಬಂದಿದ್ದಲ್ಲಿ, ಗುಣಮುಖರಾದ 90 ದಿನಗಳ ನಂತರ ವ್ಯಾಕ್ಸಿನೇಷನ್ ನೀಡಲಾಗುವುದು ಎಂದು ತಿಳಿಸಿದರು.
- ದೊಡ್ಡಬೊಮ್ಮಸಂದ್ರ ಸರ್ಕಾರಿ ಶಾಲೆಯಲ್ಲಿ, ರಾಮಚಂದ್ರ ಸರ್ಕಾರಿ ಶಾಲೆಯಲ್ಲಿ ಹಾಗೂ ತಿಂಡ್ಲು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ವ್ಯಾಕ್ಸಿನ್ ಕೇಂದ್ರ, ದೊಡ್ಡಬೊಮ್ಮಸಂದ್ರ ಆರ್ಚ್ ಹತ್ತಿರ, ಇಂದಿರಾ ಕ್ಯಾಂಟೀನ್ ಹತ್ತಿರ ವ್ಯಾಕ್ಸಿನೇಷನ್ ಕೇಂದ್ರಗಳನ್ನು ಸ್ಥಾಪಿಸಲಾಗಿದ್ದು, ಸರ್ಕಾರದ ನಿರ್ದೇಶನದಂತೆ ಸಾರ್ವಜನಿಕರು ವ್ಯಾಕ್ಸಿನ್ ಹಾಕಿಸಿಕೊಳ್ಳಬೇಕಾಗಿ ಕೋರಿದರು. ಹಾಗೂ ಲಸಿಕೆ ನೀಡುವ ಕೇಂದ್ರಗಳ ಮಾಹಿತಿಯನ್ನು ಪ್ರತಿನಿತ್ಯ ವಾಟ್ಸಪ್ ಗ್ರೂಪ್‌ಗಳಲ್ಲಿ ತಿಳಿಸಲಾಗುತ್ತಿರುತ್ತದೆ.

* ಪ್ರಸ್ತುತ ಪಾಲಿಕೆಯ ಆರೋಗ್ಯ ಸಿಬ್ಬಂಧಿಗಳು ಮನೆಮನೆಗೆ ಬೇಟಿ ನೀಡಿ ವ್ಯಾಕ್ಸಿನೇಷನ್ ಹಾಕಿಸಿಕೊಳ್ಳಲು ತಿಳುವಳಿಕೆ ನೀಡುತ್ತಿದ್ದರು, ಸಾರ್ವಜನಿಕರು ಸ್ಪಂದಿಸದಿರುವ ಬಗ್ಗೆ ಸಭೆಗೆ ತಿಳಿಸಿ, ಸಾರ್ವಜನಿಕರು ವ್ಯಾಕ್ಸಿನೇಷನ್ ಹಾಕಿಸಿಕೊಳ್ಳಲು ಅಗತ್ಯ ತಿಳುವಳಿಕೆ ನೀಡಲು ಸಭೆಯಲ್ಲಿ ನೆರೆದಿದ್ದ ಸದಸ್ಯರುಗಳಿಗೆ ಹಾಗೂ ಸಾರ್ವಜನಿಕರಿಗೆ ವೈದ್ಯಾಧಿಕಾರಿಗಳು ತಿಳಿಸಿದರು.

**ಬೀದಿ ದೀಪಗಳ ನಿರ್ವಹಣೆ ಕುರಿತು:**

* ಬೀದಿ ದೀಪಗಳ ನಿರ್ವಹಣೆಗಾಗಿ ಕರೆಯಲಾಗಿದ್ದ Global Tender ರದ್ದುಗೊಂಡಿದ್ದು, ಹೊಸದಾಗಿ ಟೆಂಡರ್ ಆಹ್ವಾನಿಸಲಾಗಿರುತ್ತದೆ. ಸದರಿ ಟೆಂಡರ್ ದಿನಾಂಕ: 19-01-2021 ರಂದು ತೆರೆಯಲಾಗುತ್ತದೆ. ನಂತರ ಗುತ್ತಿಗೆದಾರರಿಂದ ವಾರ್ಡ್ ವ್ಯಾಪ್ತಿಯ ಬೀದಿ ದೀಪಗಳ ನಿರ್ವಹಣೆಯನ್ನು ಕೈಗೊಳ್ಳಲಾಗುವುದು ಎಂದು ಸಭೆಯಲ್ಲಿ ತಿಳಿಸಿರುತ್ತಾರೆ. ಸದರಿ ಟೆಂಡರ್‌ನಲ್ಲಿ ಹಾಳಾಗಿರುವ ಕಂಬಗಳ ಬದಲಾವಣೆಗೆ ಮತ್ತು ಹೊಸದಾಗಿ ಕಂಬಗಳನ್ನು ಅಳವಡಿಸಲು ಅವಕಾಶ ಮಾಡಲಾಗಿರುತ್ತದೆ.

**ಕಾವೇರಿ ನೀರು ಸರಬರಾಜು ಕುರಿತು:**

ದೊಡ್ಡಬೊಮ್ಮಸಂದ್ರ ವ್ಯಾಪ್ತಿಯ ಆರ್.ಆರ್. ಶಾಲೆ ಹತ್ತಿರ ಕಾವೇರಿ ನೀರು ಸರಬರಾಜು ವ್ಯತ್ಯಯವಾಗಿದ್ದು, ಇದನ್ನು ಸರಿಪಡಿಸಲು ಸಾರ್ವಜನಿಕರು ಮನವಿ ಮಾಡಿರುತ್ತಾರೆ.

ಶ್ರೀ ಜಿ.ಶ್ರೀನಿವಾಸಮೂರ್ತಿ, ನೋಡಲ್ ಅಧಿಕಾರಿ ರವರು ಈ ಮೇಲ್ಕಂಡ ಅಂಶಗಳ ಬಗ್ಗೆ ಸಭೆಯಲ್ಲಿ ಉಪಸ್ಥಿತರಿದ್ದ ಅಧಿಕಾರಿಗಳು ಹಾಗೂ ಸದಸ್ಯರೊಂದಿಗೆ ಕೂಲಂಕುಶವಾಗಿ ಚರ್ಚಿಸಿದ್ದು, ಸದರಿ ವಿಷಯಗಳ ಬಗ್ಗೆ ಕ್ರಮಕೈಗೊಳ್ಳಲು ಸರ್ವಾನುಮತದಿಂದ ತೀರ್ಮಾನಿಸಿ ವಂದನಾರ್ಪಣೆಯೊಂದಿಗೆ ಸಭೆಯನ್ನು ಮುಕ್ತಾಯ ಗೊಳಿಸಲಾಯಿತು.

17/1/22

ನೋಡೆಲ್ ಅಧಿಕಾರಿ ವಾರ್ಡ್-10 ಹಾಗೂ
ಸಹಾಯಕ ಕಾರ್ಯಪಾಲಕ ಅಭಿಯಂತರರು
ಕೊಡಿಗೇಹಳ್ಳಿ ಉಪವಿಭಾಗ

<u>ಪ್ರತಿಯನ್ನು:</u>

1. ಮಾನ್ಯ ಆಯುಕ್ತರು, ಬಿಬಿಎಂಪಿ ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಜಂಟಿ ಆಯುಕ್ತರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
3. ಮುಖ್ಯ ಅಭಿಯಂತರರು, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
4. ಕಾರ್ಯಪಾಲಕ ಅಭಿಯಂತರರು, ಬ್ಯಾಟರಾಯನಪುರ ವಿಭಾಗ, ಯಲಹಂಕ ವಲಯ ರವರಿಗೆ ಅವಗಾಹನೆಗೆ ಸಲ್ಲಿಸಿದೆ.
5. ಆರೋಗ್ಯ ವೈದ್ಯಾಧಿಕಾರಿಗಳು, ಯಲಹಂಕ ವಲಯ, ಬಿಬಿಎಂಪಿ ರವರಿಗೆ ಸಲ್ಲಿಸಿ ಸಭೆಗೆ ಹಾಜರಾಗಲು ಕೋರಿದೆ.
6. ಸಹಾಯಕ ಕಂದಾಯ ಅಧೀಕಾರಿಗಳು, ಕಂದಾಯ ವಿಭಾಗ, ವಿದ್ಯಾರಣ್ಯಪುರ ವಿಭಾಗ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
7. ಸಹಾಯಕ ಕಾರ್ಯಪಾಲಕ ಅಭಿಯಂತರರು, ಘನತ್ಯಾಜ್ಯ ವಿದ್ಯಾರಣ್ಯಪುರ ವಿಭಾಗ ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೀದಿ ದೀಪಗಳ ನಿರ್ವಹಣೆ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಕೆರೆಗಳ ವಿಭಾಗ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
10. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೃಹತ್ ನೀರುಗಾಲುವೆ ವಿಭಾಗ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
11. ಸಹಾಯಕ ಕಾರ್ಯಪಾಲಕ ಅಭಿಯಂತರರು, ರಸ್ತೆ ಮತ್ತು ಮೂಲಭೂತ ಸೌಕರ್ಯ ವಿಭಾಗ, ಯಲಹಂಕ ವಲಯ, ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
12. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೋಲೀಸ್ ಠಾಣೆ (ಸಂಚಾರ) ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
13. ಠಾಣಾಧಿಕಾರಿಗಳು, ವಿದ್ಯಾರಣ್ಯಪುರ ಪೋಲೀಸ್ ಠಾಣೆ (ಲಾ ಮತ್ತು ಆರ್ಡರ್) ರವರ ಮಾಹಿತಿಗಾಗಿ ಹಾಗೂ ಅಗತ್ಯ ಕ್ರಮಕ್ಕಾಗಿ ಕಳುಹಿಸಿದೆ.
14. ಕಛೇರಿ ಕಡತಕ್ಕೆ.